1497 (2075) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಲಖಣಗಾವ, ಭಾತಂಬ್ರಾ ಮತ್ತು ನಿಟ್ಟೂರ ಗ್ರಾಮಗಳಿಗೆ 33 ಕೆ ವಿ ವಿದ್ಯುತ್ ಘಟಕಗಳು ಸರ್ಕಾರದಿಂದ ಮಂಜೂರಾಗಿದೆಯೇ,

ಆ) ಹಾಗಿದ್ದಲ್ಲಿ, ಈ ಮೂರು ಗ್ರಾಮಗಳ ವಿದ್ಯುತ್ ಘಟಕಗಳ ಕಾಮಗಾರಿ ಯಾವ ಹಂತದಲ್ಲಿದೆ,

ಇ) ಪ್ರಾರಂಭಿಸಲ್ಪಟ್ಟ ವಿದ್ಯುತ್ ಘಟಕಗಳ ಕಾಮಗಾರಿಯನ್ನು ಪ್ರಸ್ತುತ ವರ್ಷದಲ್ಲಿ ಸಂಪೂರ್ಣವಾಗಿ ಮುಗಿಸಿ ಅಲ್ಲಿಯ 3 ಗ್ರಾಮಗಳ ಜನರಿಗೆ ಹೆಚ್ಚಿನ ವಿದ್ಯುತ್ ಸೌಲಭ್ಯ ಕಲ್ಪಿಸಿ ಕೊಡಲಾಗುವುದೆ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಭಾಲ್ಕಿ ಕ್ಷೇತ್ರ ವ್ಯಾಪ್ತಿಯ ಭಾತಂಬ್ರದಲ್ಲಿ ಒಂದು 33/11 ಕೆ ವಿ ವಿದ್ಯುತ್ ಕೇಂದ್ರ ಮಂಜೂರಾಗಿರುತ್ತದೆ ನಿಟ್ಟೂರು ಮತ್ತು ಲಖಣಗಾವ ಗ್ರಾಮಗಳಲ್ಲಿ 33/11 ಕೆ ವಿ ವಿದ್ಯುತ್ ಕೇಂದ್ರಗಳ ಸ್ಥಾಪನೆ ಬಗ್ಗೆ ಪ್ರಸ್ತಾವನೆಗಳು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯಿಂದ ಅನುಮೋದನೆ ಆಗಬೇಕಾಗಿರುತ್ತದೆ

ಆ) ಭಾತಂಬ್ರದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ 33/11 ಕೆ ವಿ ವಿದ್ಯುತ್ ಉಪಕೇಂದ್ರಕ್ಕೆ ಬೇಕಾಗಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕ್ರಮ ಜರುಗಿಸಲಾಗುತ್ತಿದೆ ನಿಟ್ಟೂರು ಮತ್ತು ಲಖಣಗಾವ ಗ್ರಾಮಗಳಲ್ಲಿ 33/11 ಕೆ ವಿ ವಿದ್ಯುತ್ ಕೇಂದ್ರಗಳ ಸ್ಥಾಪನೆಯ ಬಗ್ಗೆ ಪ್ರಸ್ತಾವನೆಗಳಿಗೆ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯಿಂದ ಅನುಮೋದನೆಯನ್ನು ಪಡೆಯಲು ಕ್ರಮಗಳನ್ನು ಜರುಗಿಸಲಾಗುತ್ತಿದೆ

ಇ) ಭಾತಂಬ್ರದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ 33/11 ಕೆ ವಿ ವಿದ್ಯುತ್ ಉಪಕೇಂದ್ರಕ್ಕೆ ಬೇಕಾಗಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತಿರುವುದರಿಂದ

ಕಾಮಗಾರಿಯು ಪ್ರಾರಂಭವಾಗಿರುವುದಿಲ್ಲ ಮುಂಬರುವ ವರ್ಷವಾದ 2007–08ರಲ್ಲಿ ಈ ಉದ್ದೇಶಿತ 33/11 ಕೆ ವಿ ವಿದ್ಯುತ್ ಕೇಂದ್ರದ ಕಾಮಗಾರಿಯನ್ನು ಪ್ರಾರಂಭಿಸಿ, ಅದೇ ವರ್ಷದ ಅಂತ್ಯದೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ

ನಿಟ್ಟೂರು ಮತ್ತು ಲಖಣಗಾವ ಗ್ರಾಮಗಳಲ್ಲಿ 33/11 ಕೆ ವಿ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆಯ ಪ್ರಸ್ತಾವನೆಗೆ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆ ದೊರೆತ ನಂತರ, ಮುಂದಿನ ಕ್ರಮಗಳನ್ನು ಜರುಗಿಸಲಾಗುವುದು

1498 (2076) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಹ್ಮದಾಬಾದ್ ಗ್ರಾಮಕ್ಕೆ 110 ಕೆ ವಿ ವಿದ್ಯುತ್ ಘಟಕ ಮಂಜೂರಾತಿಯಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಈ ಗ್ರಾಮಕ್ಕೆ ಮಂಜೂರಾಗಿರುವ 110 ಕೆ ವಿ ವಿದ್ಯುತ್ ಘಟಕದ ಕಾರ್ಯ ಈಗ ಯಾವ ಹಂತದಲ್ಲಿದೆ,

ಇ) ಪ್ರಸ್ತುತ ವರ್ಷದಲ್ಲಿ ಈ ಘಟಕ ಕೆಲಸ ಸಂಪೂರ್ಣ ಮುಗಿಸಿ ಅಲ್ಲಿಯ ಜನರಿಗೆ 110 ಕೆ ವಿ ವಿದ್ಯುತ್ ಘಟಕದ ಸೌಲಭ್ಯ ಒದಗಿಸಿಕೊಡಲಾಗುವುದೇ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಇಲ್ಲ ಭಾಲ್ಕಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಹ್ಮದಾಬಾದ್ ಗ್ರಾಮಕ್ಕೆ 110 ಕೆ ವಿ ವಿದ್ಯುತ್ ಉಪ ಕೇಂದ್ರದ ಮಂಜೂರಾತಿಯ ಪ್ರಸ್ತಾವನೆಯು ಇರುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ